**All India Radio: Bangalore**
**National Bulletin In Kannada**
**22.04.2025 07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**22.04.2025 07.35 a.m.**
******************

ಮುಖ್ಯಾಂಶಗಳು

೧. ಭಾರತ-ಅಮೆರಿಕಾ ನಡುವೆ ವಿವಿಧ ವಲಯಗಳಲ್ಲಿ ದ್ವಿಪಕ್ಷೀಯ ಸಹಕಾರದಲ್ಲಿನ ಪ್ರಗತಿ ಕುರಿತು ಪ್ರಧಾನಿ ನರೇಂದ್ರ ಮೋದಿ ಮತ್ತು ಅಮೆರಿಕಾ ಉಪಾಧ್ಯಕ್ಷ ಜೆ.ಡಿ.ವಾನ್ಸ್ ಅವರಿಂದ ಪರಾಮರ್ಶೆ

೨. ಪ್ರಧಾನಿ ನರೇಂದ್ರ ಮೋದಿ ಇಂದಿನಿಂದ ಎರಡು ದಿನಗಳ ಕಾಲ ಸೌದಿ ಅರೇಬಿಯಾ ಪ್ರವಾಸ

೩. ಅಮೆರಿಕಾದ ನೂತನ ಆಡಳಿತದೊಂದಿಗೆ ಭಾರತ ಸಕ್ರಿಯವಾಗಿ ಭಾಗಿ; ದ್ವಿಪಕ್ಷೀಯ ವ್ಯಾಪಾರ ಒಪ್ಪಂದ ಕುರಿತು ಸಕಾರಾತ್ಮಕ ಚಿಂತನೆ - ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್

೪. ಕೇಂದ್ರ ಸರ್ಕಾರದಿಂದ ಉಕ್ಕು ಆಮದಿನ ಮೇಲೆ ಶೇಕಡ ೧೨ ರಷ್ಟು ಸುರಕ್ಷತಾ ಸುಂಕ - ಉಕ್ಕು ಉದ್ಯಮದ ಬೆಳವಣಿಗೆಗೆ ಸಹಕಾರಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ

೫. ಐಪಿಎಲ್ ಟಿ-೨೦ ಕ್ರಿಕೆಟ್; ಕೊಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ಗುಜರಾತ್ ಟೈಟಾನ್ಸ್‌ಗೆ ೩೯ ರನ್‌ಗಳ ಜಯ

******************

ಭಾರತ ಪ್ರವಾಸದಲ್ಲಿರುವ ಅಮೆರಿಕಾದ ಉಪಾಧ್ಯಕ್ಷ ಜೆ.ಡಿ.ವಾನ್ಸ್ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದೆಹಲಿಯಲ್ಲಿ ನಿನ್ನೆ ಮಹತ್ವದ ಮಾತುಕತೆ ನಡೆಸಿದರು.

ಈ ಸಂದರ್ಭದಲ್ಲಿ ಉಭಯ ನಾಯಕರು ವಿವಿಧ ವಲಯಗಳಲ್ಲಿನ ದ್ವಿಪಕ್ಷೀಯ ಸಹಕಾರದಲ್ಲಿ ಆಗಿರುವ ಪ್ರಗತಿಯನ್ನು ಪರಾಮರ್ಶೆ ನಡೆಸಿದರು. ಭಾರತ ಮತ್ತು ಅಮೆರಿಕಾ ನಡುವೆ ಉದ್ದೇಶಿತ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದಿಂದಾಗಿ ಉಭಯ ದೇಶಗಳ ನಡುವಿನ ಜನರ ಕಲ್ಯಾಣಕ್ಕೆ ಕೈಗೊಳ್ಳಲಿರುವ ಸಂಬಂಧದ ಸಂಧಾನ ಮಾತುಕತೆಗಳಲ್ಲಿ ಆಗಿರುವ ಪ್ರಮುಖ ಬೆಳವಣಿಗೆಗಳನ್ನು ನಾಯಕರು ಸ್ವಾಗತಿಸಿದ್ದಾರೆ.

ಇಂಧನ, ರಕ್ಷಣೆ, ವ್ಯೂಹಾತ್ಮಕ ತಂತ್ರಜ್ಞಾನಗಳು ಮತ್ತು ಇತರ ವಲಯಗಳಲ್ಲಿ ಪರಸ್ಪರ ಸಹಕಾರ ವಿಸ್ತರಣೆ ನಿಟ್ಟಿನಲ್ಲಿ ಕೈಗೊಂಡಿರುವ ಮುಂದುವರೆದ ಪ್ರಯತ್ನಗಳ ಬಗ್ಗೆ ಉಭಯ ನಾಯಕರು ಗಮನ ಹರಿಸಿದರು. ಪರಸ್ಪರ ಹಿತಾಸಕ್ತಿ ಕಾಯ್ದುಕೊಳ್ಳುವ ವಿವಿಧ ಪ್ರಾದೇಶಿಕ ಮತ್ತು ಜಾಗತಿಕ ವಿಚಾರಗಳ ಕುರಿತು ಉಭಯ ನಾಯಕರು ತಮ್ಮ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಮುಂಬರುವ ದಿನಗಳಲ್ಲಿ ಸಂಧಾನ ಮಾತುಕತೆ ಮತ್ತು ರಾಜತಾಂತ್ರಿಕತೆಯನ್ನು ಮುಂದುವರೆಸುವ ಅಗತ್ಯತೆಯನ್ನು ಪ್ರತಿಪಾದಿಸಿದರು.

ಅಮೆರಿಕಾದ ಉಪಾಧ್ಯಕ್ಷರು ತಮ್ಮ ಪತ್ನಿ ಉಷಾ ಮತ್ತು ಮಕ್ಕಳೊಂದಿಗೆ ಭಾರತಕ್ಕೆ ಆಗಮಿಸಿದ್ದಾರೆ. ಅವರೊಂದಿಗೆ ಅಮೆರಿಕಾ ಆಡಳಿತದ ಹಿರಿಯ ಅಧಿಕಾರಿಗಳ ನಿಯೋಗ ಸಹ ಆಗಮಿಸಿದೆ. ವ್ಯಾನ್ಸ್ ಅವರ ಗೌರವಾರ್ಥ ಪ್ರಧಾನಿ ನರೇಂದ್ರ ಮೋದಿ ದೆಹಲಿಯಲ್ಲಿ ನಿನ್ನೆ ಔತಣಕೂಟ ಏರ್ಪಡಿಸಿದರು.

ಈ ಸಂದರ್ಭದಲ್ಲಿ ಪ್ರಧಾನಿ ಅವರ ಇದೇ ವರ್ಷದ ಫೆಬ್ರವರಿಯಲ್ಲಿ ವಾಷಿಂಗ್ಟನ್ ಡಿಸಿಗೆ ಭೇಟಿ ನೀಡಿದ್ದ ಸಂದರ್ಭವನ್ನು ಸಂತಸದಿಂದ ನೆನಪಿಸಿಕೊಂಡರು.

ಇದೇ ವೇಳೆ, ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ನಡೆಸಿದ ಫಲಪ್ರದ ಮಾತುಕತೆಗಳನ್ನು ಮೆಲುಕು ಹಾಕಿದರು. ಅಮೆರಿಕಾ ಅಧ್ಯಕ್ಷರೊಂದಿಗಿನ ಮಾತುಕತೆ ಸಂದರ್ಭದಲ್ಲಿ ಭಾರತ-ಅಮೆರಿಕಾ ನಡುವೆ ಪರಸ್ಪರ ನಿಕಟ ಸಹಕಾರ ಕುರಿತ ನೀಲ ನಕ್ಷೆಗೆ ರೂಪ ನೀಡಲಾಯಿತು.

ವಿಕಸಿತ ಭಾರತ ೨೦೪೭ ಮತ್ತು ಮೇಕ್ ಅಮೆರಿಕಾ ಗ್ರೇಟ್ ಎಗೈನ್ ಕುರಿತ ಗುರಿ ಸಾಧನೆ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಲವರ್ಧನೆಗೂ ಚಿಂತನೆ ನಡೆಸಲಾಗಿತ್ತೆಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

ಅಮೆರಿಕಾದ ಉಪಾಧ್ಯಕ್ಷ, ಅವರ ಪತ್ನಿ ಮತ್ತು ಮಕ್ಕಳು ಕೈಗೊಂಡಿರುವ ಭಾರತ ಪ್ರವಾಸ ಅತ್ಯಂತ ಉಲ್ಲಾಸದಿಂದ ಹಾಗೂ ಉಪಯುಕ್ತತೆಯಿಂದ ಕೂಡಿರಲಿ ಎಂದು ಪ್ರಧಾನಿ ಶುಭ ಹಾರೈಸಿದರು. ಅಲ್ಲದೇ, ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ತಮ್ಮ ಶುಭಾಶಯವನ್ನು ತಿಳಿಸುವಂತೆ ನರೇಂದ್ರ ಮೋದಿ ಹೇಳಿದರು. ಈ ವರ್ಷಾಂತ್ಯಕ್ಕೆ ಡೊನಾಲ್ಡ್ ಟ್ರಂಪ್ ಅವರ ಭಾರತ ಭೇಟಿಯನ್ನು ತಾವು ಎದುರು ನೋಡುತ್ತಿರುವುದಾಗಿಯೂ ತಿಳಿಸಿದರು.

ನಾಲ್ಕು ದಿನಗಳ ಭಾರತ ಭೇಟಿಗಾಗಿ ಅಮೆರಿಕಾ ಉಪಾಧ್ಯಕ್ಷರು ನಿನ್ನೆ ನವದೆಹಲಿಗೆ ಆಗಮಿಸಿದರು. ಅವರನ್ನು ರಾಷ್ಟ್ರ ರಾಜಧಾನಿಯಲ್ಲಿನ ವಿಮಾನ ನಿಲ್ದಾಣದಲ್ಲಿ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಆತ್ಮೀಯವಾಗಿ ಬರಮಾಡಿಕೊಂಡರು. ಅಮೆರಿಕಾ ಉಪಾಧ್ಯಕ್ಷರಿಗೆ ಇದೇ ಸಂದರ್ಭದಲ್ಲಿ ಸಾಂಪ್ರದಾಯಿಕ ಸ್ವಾಗತ ಕೋರಲಾಯಿತು.

*****************

ಈ ನಡುವೆ ಭಾರತ ಪ್ರವಾಸದಲ್ಲಿರುವ ಅಮೆರಿಕಾ ಉಪಾಧ್ಯಕ್ಷ ಜೆ.ಡಿ.ವಾನ್ಸ್ ನಿನ್ನೆ ರಾತ್ರಿ ಜೈಪುರ ತಲುಪಿದರು.

ಉಪಾಧ್ಯಕ್ಷರು ಜೈಪುರದಲ್ಲಿ ಮೂರು ದಿನ ವಾಸ್ತವ್ಯ ಹೂಡಲಿದ್ದಾರೆ. ಅವರೊಂದಿಗೆ ಅವರ ಕುಟುಂಬ ಸದಸ್ಯರು ಇದ್ದಾರೆ. ಅಮೆರಿಕಾ ಆಡಳಿತದ ಹಿರಿಯ ಅಧಿಕಾರಿಗಳ ನಿಯೋಗವೂ ಉಪಾಧ್ಯಕ್ಷರೊಂದಿಗೆ ಇದೆ.

*****************

ಪ್ರಧಾನಿ ನರೇಂದ್ರ ಮೋದಿ ಇಂದಿನಿಂದ ಸೌದಿ ಅರೇಬಿಯಾಕ್ಕೆ ಎರಡು ದಿನಗಳ ಪ್ರವಾಸ ಕೈಗೊಳ್ಳಲಿದ್ದಾರೆ. ಯುವರಾಜ ಮತ್ತು ಪ್ರಧಾನಮಂತ್ರಿ ಮೊಹಮ್ಮದ್ ಬಿನ್ ಸಲ್ಮಾನ್ ಅವರ ಆಹ್ವಾನದ ಮೇರೆಗೆ ಪ್ರಧಾನಿ ಸೌದಿ ಅರೇಬಿಯಾಕ್ಕೆ ತೆರಳಿದ್ದಾರೆ.

ಈ ದೇಶಕ್ಕೆ ಪ್ರಧಾನಿ ಭೇಟಿ ನೀಡುತ್ತಿರುವುದು ಮೂರನೇ ಬಾರಿಯಾಗಿದೆ. ಈ ಭೇಟಿಯಿಂದ ಉಭಯ ದೇಶಗಳ ನಡುವೆ ತಾಂತ್ರಿಕ ಪಾಲುದಾರಿಕೆಯನ್ನು ಮತ್ತಷ್ಟು ಆಳಗೊಳಿಸುವುದು, ವ್ಯಾಪಾರ, ಇಂಧನ, ರಕ್ಷಣಾ ಮತ್ತು ಜನರ ನಡುವಿನ ಸಂಬಂಧಗಳನ್ನು ಉತ್ತಮಗೊಳಿಸುವ ಉದ್ದೇಶವನ್ನು ಹೊಂದಲಾಗಿದೆ.

೪ ದಶಕಗಳ ನಂತರ ಭಾರತೀಯ ನಾಯಕರೊಬ್ಬರು ಸೌದಿ ಅರೇಬಿಯಾದ ವಾಣಿಜ್ಯ ಕೇಂದ್ರಕ್ಕೆ ಭೇಟಿ ನೀಡುತ್ತಿರುವುದು ಇದೇ ಮೊದಲು. ಪ್ರವಾಸದ ಸಮಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಅಲ್ಲಿನ ಕಾರ್ಖಾನೆಗೆ ಭೇಟಿ ನೀಡಿ, ಭಾರತೀಯ ಕಾರ್ಮಿಕರೊಂದಿಗೆ ಸಂವಾದ ನಡೆಸಲಿದ್ದಾರೆ.

ಇತ್ತೀಚಿನ ವರ್ಷಗಳಲ್ಲಿ ಸೌದಿ ಅರೇಬಿಯಾದಲ್ಲಿ ಭಾರತದ ಹೂಡಿಕೆ ಗಣನೀಯವಾಗಿ ಏರಿಕೆಯಾಗಿದೆ.

೨೦೨೩-೨೪ರ ಹಣಕಾಸು ವರ್ಷದಲ್ಲಿ ದ್ವಿಪಕ್ಷೀಯ ವ್ಯಾಪಾರ ಅಧಿಕವಾಗಿದ್ದು, ಸೌದಿ ಅರೇಬಿಯಾದಿಂದ ಭಾರತಕ್ಕೆ ಆಮದು ೩೧.೪೨ ಬಿಲಿಯನ್ ಅಮೆರಿಕನ್ ಡಾಲರ್‌ಗಳಷ್ಟಾಗಿದ್ದು, ಸೌದಿ ಅರೇಬಿಯಾಗೆ ಭಾರತದಿಂದ ಮಾಡಲಾದ ರಫ್ತು ಪ್ರಮಾಣ ೧೧.೫೮ ಬಿಲಿಯನ್ ಅಮೆರಿಕನ್ ಡಾಲರ್‌ಗಳಷ್ಟಿತ್ತು.

ಭಾರತದಿಂದ ರಫ್ತು ಮಾಡುವ ಪ್ರಮುಖ ವಸ್ತುಗಳಲ್ಲಿ ಅಕ್ಕಿ, ಪೆಟ್ರೋಲಿಯಂ ಉತ್ಪನ್ನಗಳು, ರಾಸಾಯನಿಕಗಳು, ಜವಳಿ, ಆಹಾರ ಉತ್ಪನ್ನಗಳು ಮತ್ತು ಪಿಂಗಾಣಿ ಟೈಲ್ಸ್ ಸೇರಿವೆ. ಭಾರತ ಕಚ್ಚಾತೈಲ, ಎಲ್‌ಪಿಜಿ ರಸಗೊಬ್ಬರಗಳು ಮತ್ತು ಪ್ಲಾಸ್ಟಿಕ್ ಉತ್ಪನ್ನಗಳನ್ನು ಆಮದು ಮಾಡಿಕೊಳ್ಳುತ್ತಿದೆ.

******************

ಅಮೆರಿಕಾದ ನೂತನ ಆಡಳಿತ ವ್ಯವಸ್ಥೆಯೊಂದಿಗೆ ಭಾರತ ಸಕ್ರಿಯವಾಗಿ ತೊಡಗಿಸಿಕೊಂಡಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನಿನ್ನೆ ಹೇಳಿದ್ದಾರೆ.

ಉಭಯ ದೇಶಗಳ ನಡುವೆ ದ್ವಿಪಕ್ಷೀಯ ವ್ಯಾಪಾರ ಒಪ್ಪಂದಕ್ಕೆ ಈ ವರ್ಷದ ಸೆಪ್ಟಂಬರ್ ಅಕ್ಟೋಬರ್ ತಿಂಗಳಲ್ಲಿ ಮೊದಲ ಹಂತವಾಗಿ ಸಕಾರಾತ್ಮಕ ಪ್ರತಿಕ್ರಿಯೆ ದೊರೆಯುವ ವಿಶ್ವಾಸವನ್ನು ನಿರ್ಮಲಾ ಸೀತಾರಾಮನ್ ವ್ಯಕ್ತಪಡಿಸಿದ್ದಾರೆ.

ಈ ವರ್ಷದ ಆರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಅಮೆರಿಕಾ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ದ್ವಿಪಕ್ಷೀಯ ವ್ಯಾಪಾರ ಬಿಟಿಎ ಮಾಡಿಕೊಳ್ಳುವ ಸಂಬಂಧ ಮಾತುಕತೆಗೆ ಚಾಲನೆ ನೀಡಿದ್ದರು.

ಈ ಒಪ್ಪಂದ ಕಾರ್ಯ ಸಾಧ್ಯವಾದರೆ ೨೦೩೦ರ ವೇಳೆಗೆ ಉಭಯ ದೇಶಗಳ ನಡುವೆ ೫೦೦ ಶತಕೋಟಿ ಅಮೆರಿಕನ್ ಡಾಲರ್‌ಗಳಷ್ಟು ವ್ಯಾಪಾರ ವಹಿವಾಟು ನಡೆಸುವ ಗುರಿ ಹೊಂದಲಾಗಿದೆ.

ಈ ನಡುವೆ ನಿರ್ಮಲಾ ಸೀತಾರಾಮನ್ ಅವರು ಅಮೆರಿಕಾದ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ಅವರನ್ನು ಭೇಟಿ ಮಾಡುವ ಕಾರ್ಯಕ್ರಮವಿದೆ. ಅಮೆರಿಕಾದ ವ್ಯಾಪಾರ ಪ್ರತಿನಿಧಿಗಳ ಕಚೇರಿಯಲ್ಲಿ ಅವರು ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡುವ ನಿರೀಕ್ಷೆ ಇದೆ.

ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿ ನಾಯಕತ್ವ ಫಲವಾಗಿ ಭಾರತ ಅತ್ಯಂತ ವೇಗದಲ್ಲಿ ಪ್ರಗತಿ ಕಾಣುತ್ತಿರುವ ಆರ್ಥಿಕ ರಾಷ್ಟ್ರವಾಗಿದೆ. ಮುಂದುವರೆದ ಸರ್ಕಾರದಿಂದ ಸ್ಥಿರತೆಯನ್ನು ಒದಗಿಸಲಾಗಿದೆ ಎಂದು ಕೇಂದ್ರ ವಿತ್ತ ಸಚಿವರು ತಿಳಿಸಿದ್ದಾರೆ.

ಅಮೆರಿಕಾಕ್ಕೆ ಐದು ದಿನಗಳ ಪ್ರವಾಸ ಕೈಗೊಂಡಿರುವ ನಿರ್ಮಲಾ ಸೀತಾರಾಮನ್ ಸ್ಟಾನ್‌ಫೋರ್ಡ್ ವಿಶ್ವವಿದ್ಯಾಲಯದಲ್ಲಿ ಪ್ರದಾನ ಭಾಷಣ ಮಾಡುವ ಕಾರ್ಯಕ್ರಮವಿದೆ.

ಇದೇ ಸಂದರ್ಭದಲ್ಲಿ ಅವರು ಭಾರತದಲ್ಲಿ ಬಂಡವಾಳ ಹೂಡಿಕೆ ಮತ್ತು ಆಧುನಿಕ ತಂತ್ರಜ್ಞಾನಗಳ ಅಳವಡಿಕೆ ಸಂಬಂಧ ಸ್ಯಾನ್‌ಫ್ರಾನ್ಸಿಸ್ಕೊದಲ್ಲಿ ಸಿಇಒಗಳ ಜೊತೆ ಚರ್ಚೆ ನಡೆಸಲಿದ್ದಾರೆ.

******************

ದೇಶದ ಉಕ್ಕು ಉದ್ಯಮದ ಹಿತರಕ್ಷಣೆ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ರಕ್ಷಣಾತ್ಮಕ ಕ್ರಮ ಕೈಗೊಂಡಿದ್ದು, ಉಕ್ಕು ಆಮದಿನ ಮೇಲೆ ಕೇಂದ್ರ ಸರ್ಕಾರ ಶೇಕಡ ೧೨ ರಷ್ಟು ಸುರಕ್ಷತಾ ಸುಂಕವನ್ನು ವಿಧಿಸಿದೆ.

ಈ ಸಂಬಂಧ ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವ ಎಚ್.ಡಿ.ಕುಮಾರಸ್ವಾಮಿ ಪ್ರಧಾನಿ ನರೇಂದ್ರ ಮೋದಿಯವರಿಗೆ ಕೃತಜ್ಞತೆ ಸಲ್ಲಿಸಿದ್ದು, ಈ ಉಪಕ್ರಮದಿಂದ ದೇಶೀಯ ಉಕ್ಕು ಉದ್ಯಮಕ್ಕೆ ಪ್ರೋತ್ಸಾಹದ ಜೊತೆಗೆ ಮತ್ತಷ್ಟು ಶಕ್ತಿ ತುಂಬಲಿದೆ ಎಂದು ಹೇಳಿದ್ದಾರೆ.

ಮಿಶ್ರ ಲೋಹವಲ್ಲದ ಮತ್ತು ಮಿಶ್ರಲೋಹದ ಉಕ್ಕಿನಿಂದ ತಯಾರಿಸಿದ ಕೆಲವು ಉತ್ಪನ್ನಗಳ ಆಮದಿನ ಮೇಲೆ ಶೇಕಡ ೧೨ ರಷ್ಟು ಸುರಕ್ಷತಾ ಸುಂಕ ವಿಧಿಸುವ ನಿರ್ಧಾರವನ್ನು ಕೇಂದ್ರ ಸರ್ಕಾರ ನಿನ್ನೆ ಕೈಗೊಂಡಿದ್ದು ಇದಕ್ಕೆ ಸಂಬಂಧಿಸಿದ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಆಮದು ಹೆಚ್ಚಳದ ಪ್ರತಿಕೂಲ ಪರಿಣಾಮಗಳಿಂದ ದೇಶೀಯ ಉಕ್ಕು ತಯಾರಕರನ್ನು ರಕ್ಷಿಸಲು ಮತ್ತು ಮಾರುಕಟ್ಟೆಯಲ್ಲಿ ನ್ಯಾಯಯುತ ಸ್ಪರ್ಧೆಯನ್ನು ಖಾತ್ರಿ ಪಡಿಸಿಕೊಳ್ಳಲು ಈ ಕ್ರಮ ಸಕಾಲಿಕ ಮತುತ ಅಗತ್ಯ ಕ್ರಮವಾಗಿದೆ ಎಂದು ಕುಮಾರಸ್ವಾಮಿ ತಿಳಿಸಿದ್ದಾರೆ.

******************

ಕೊಲ್ಕತ್ತಾದ ಈಡನ್ ಗಾರ್ಡನ್‌ನಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ಕೊಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ೩೯ ರನ್‌ಗಳಿಂದ ಜಯಗಳಿಸಿದೆ. ಗುಜರಾತ್ ಟೈಟಾನ್ಸ್ ೩ ವಿಕೆಟ್ ನಷ್ಟಕ್ಕೆ ೧೯೮ ರನ್‌ಗಳನ್ನು ಕಲೆಹಾಕಿತು. ೧೯೯ ರನ್‌ಗಳ ಗುರಿ ಬೆನ್ನತ್ತಿದ್ದ ಕೊಲ್ಕತ್ತಾ ನೈಟ್ ರೈಡರ್ಸ್ ತಂಡ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ಕೇವಲ ೧೫೯ ರನ್‌ಗಳಿಸಲಷ್ಟೆ ಶಕ್ತವಾಯಿತು.

ಕೊಲ್ಕತ್ತಾ ನೈಟ್ ರೈಡರ್ಸ್ ಪರವಾಗಿ ಅಜಿಂಕ್ಯಾ ರಹಾನೆ ಅರ್ಧಶತಕ ಗಳಿಸಿದರು. ಗುಜರಾತ್ ಟೈಟಾನ್ಸ್ ತಂಡದ ನಾಯಕ ಶುಭಮನ್‌ಗಿಲ್ ೯೦ ಸಾಯಿ ಸುದರ್ಶನ್ ೫೨ ರನ್ ಗಳಿಸಿದ್ದರು. ಶುಭಮನ್‌ಗಿಲ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಪಾತ್ರರಾದರು.

ಲಕ್ನೊದ ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಏಕನ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಪಂದ್ಯದಲ್ಲಿ ಲಕ್ನೋ ಸೂಪರ್ ಜೇಂಟ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿಯಾಗಲಿದೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

*****************